# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

---

ಸಂ: ಸ.ಅ/ವಾ-161/2021-22 ದಿನಾಂಕ : 19/03/2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಐ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :19-03-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :19-03-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಪ್ರೆಸ್ಟೀಜ್ ಅಪಾರ್ಟ್‌ಮೆಂಟ್ ಸುತ್ತ ಸಾಕಿರುವ ನಾಯಿಗಳನ್ನು ಪಾದಚಾರಿಯ ಮಾರ್ಗದಲ್ಲಿ ಓಡಾಡಿಸಿ ಅವುಗಳ ಮಲಮೂತ್ರ ವಿಸರ್ಜನೆಯನ್ನು ಸ್ವಚ್ಛಗೊಳಿಸದೆ ಅಕ್ಕಪಕ್ಕದ ನಿವಾಸಿಗಳಿಗೆ ಬಹಳ ತೊಂದರೆಯಾಗಿರುವ ಬಗ್ಗೆ ಸ್ಥಳೀಯರಿಂದ ದೂರು ನೀಡಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
2) ಬೆಸ್ಕಾಂ ಕೇಬಲ್ ಅಳವಡಿಸಿರುವುದನ್ನು ಪೂರ್ಣಗೊಳಿಸಲಾಗಿದೆ ಎಂದು ಸಂಬಂಧಪಟ್ಟ ಅಭಿಯಂತರರು ಸಭೆಗೆ ತಿಳಿಸಿರುತ್ತಾರೆ..
3) ಒಳಚರಂಡಿ ಮಾರ್ಗದಲ್ಲಿ ಇರುವ ಮ್ಯಾನ್‌ಹೋಲ್‌ನಲ್ಲಿ ಸ್ಲಿಲ್ಟ್ ತೆಗೆದು ಸ್ವಚ್ಛಗೊಳಿಸಿ ಸದರಿ ಮಣ್ಣನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ತೆರವುಗೊಳಿಸಬೇಕಾಗಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಶೀಘ್ರ ಸ್ವಚ್ಛಗೊಳಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.
4) ಬೀದಿ ದೀಪಗಳನ್ನು ಸಮರ್ಪಕವಗಿ ನಿರ್ವಹಣೆ ಮಾಡದಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.
5) ಎಸ್.ಡಬ್ಲ್ಯೂ.ಎಂ ನ ಎ.ಇ.ಇ ಗಳು ಸಭೆಗೆ ಬರದೇ ಇರುವುದನ್ನು ಗಮನಿಸಲಾಗಿದ್ದು, ಮುಂದಿನ ಸಭೆಗೆ ಹಾಜರಾಗಲು ಸದಸ್ಯರು ಸೂಚಿಸಿರುತ್ತಾರೆ. ತಪ್ಪಿದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಸಹಿ) (ಸಹಿ) 19/03/2022

ವಾರ್ಡ್ ಸಮಿತಿ ಸಂಚಾಲಕರು ವಾರ್ಡ್ 161 ರ ನೋಡಲ್ ಅಧಿಕಾರಿ.